ಸಂಪುಟ 01 | ಸಂಚಿಕೆ 99 | ಮಂಗಳವಾರ 24 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಕೇಂದ್ರ ಅಬಕಾರಿ ದಿನ

ಉತ್ಪಾದನಾ ವ್ಯವಹಾರದಲ್ಲಿ ಭ್ರಷ್ಟಾಚಾರವನ್ನು ತಡೆಗಟ್ಟಲು ಮತ್ತು ಭಾರತದಲ್ಲಿ ಅತ್ಯುತ್ತಮವಾದ ವ್ಯಾಯಾಮ ಸೇವೆಗಳನ್ನು ನಿರ್ವಹಿಸಲು ಅಬಕಾರಿ ಇಲಾಖೆಯ ನೌಕರರು ಕೇಂದ್ರ ಅಬಕಾರಿ ಸುಂಕವನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಲು ಪ್ರೋತ್ಸಾಹಿಸಲು ಪ್ರತಿ ವರ್ಷ ಫೆಬ್ರವರಿ 24 ರಂದು ಭಾರತದಲ್ಲಿ ಕೇಂದ್ರ ಅಬಕಾರಿ ದಿನವನ್ನು ಆಚ-ರಿಸಲಾಗುತ್ತದೆ.

## ಸುಭಾಷಿತ

ಕಾಲ ಎಲ್ಲವನ್ನೂ ತೋರಿಸುತ್ತದೆ. ಸಹನೆ ಎಲ್ಲವನ್ನೂ ಗೆಲ್ಲಿಸುತ್ತದೆ. ನಂಬಿಕೆ ದಾರಿ ತೋರಿಸುತ್ತದೆ. ಅನುಭವ ಗುರಿ ತಲುಪಿಸುತ್ತದೆ.

ಶ್ರೀ ಸಿದ್ದೇಶ್ವರ ಸ್ವಾಮೀಜಿ

# ಮೆಕ್ಸಿಕೋದಲ್ಲಿ ಹಿಂಸಾಚಾರ ಎಚ್ಚರಿಕೆಯಿಂದಿರಲು ಭಾರತೀಯರಿಗೆ ಸೂಚನೆ

ನೈಜ್ಯ ದೆಸೆ ನ್ಯೂಸ್

ಮೆಕ್ಸಿಕೋ: ಮೆಕ್ಸಿಕೋ ಸೈನಿಕರು ಉನ್ನತ ಮಾದಕವಸ್ತು ಕಾರ್ಟೆಲ್ ನಾಯಕನನ್ನು ಕೊಂದ ನಂತರ ಹೆಚ್ಚುತ್ತಿರುವ ಹಿಂಸಾಚಾರದ ನಡುವೆ ಮೆಕ್ಸಿಕೋದಲ್ಲಿರುವ ಭಾರತದ ರಾಯಭಾರಿ ಕಚೇರಿ ತನ್ನ ದೇಶದಲ್ಲಿ ವಾಸಿಸುವ ಭಾರತೀಯ ಪ್ರಜೆಗಳಿಗೆ ಎಚ್ಚರಿಕೆ ನೀಡಿದೆ ಮತ್ತು ಮನೆಯೊಳಗೆ ಇರುವಂತೆ ಒತ್ತಾಯಿಸಿದೆ.

ಜಲಿಸ್ಕೊ ನ್ಯೂ ಜನರೇಷನ್ ಕಾರ್ಟೆಲ್‌ನ ನಾಯಕ ಎಲ್ ಮೆಂಚೊ ಎಂದೂ ಕರೆಯಲ್ಪಡುವ ನೆಮೆಸಿಯೊ ಒಸೆಗುರಾ ಸೆರ್ವಾಂಟೆಸ್ ಅವರನ್ನು ನಿನ್ನೆ ಕೊಲ್ಲಲಾಯಿತು. ಮೆಕ್ಸಿಕೋದಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳೇ. ಭದ್ರತಾ ಕಾರ್ಯಾಚರಣೆಗಳು ಮತ್ತು ಸಂಬಂಧಿತ ರಸ್ತೆ ತಡೆಗಳು ಮತ್ತು ಅಪರಾಧ ಚಟುವಟಿಕೆಗಳು ನಡೆಯುತ್ತಿವೆ, ಜಲಿಸ್ಕೊ ರಾಜ್ಯ (ಪೋರ್ಟೊ ವಲ್ಲರ್ಟಾ, ಚಾಪಲಾ ಮತ್ತು ಗ್ವಾಡಲಜರಾ ಪ್ರದೇಶಗಳು), ತಮೌಲಿಪಾಸ್ ರಾಜ್ಯ (ರೇನೋಸಾ ಮತ್ತು ಇತರ ಪುರಸಭೆಗಳ



ಪ್ರದೇಶಗಳು), ಮೈಕೋಕನ್ ರಾಜ್ಯ, ಗೆರೆರೊ ರಾಜ್ಯ ಮತ್ತು ನ್ಯೂಯೆವೊ ಲಿಯಾನ್ ರಾಜ್ಯಗಳ ಪ್ರದೇಶಗಳಲ್ಲಿನ ಭಾರತೀಯ ಪ್ರಜೆಗಳು ಮುಂದಿನ ಸೂಚನೆ ಬರುವವರೆಗೆ ಸ್ಥಳದಲ್ಲಿ ಆಶ್ರಯ ಪಡೆಯಬೇಕು ಎಂದು ಮೆಕ್ಸಿಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿ ಎಕ್ಸ್ ಮಾಡಿದೆ. ರಾಯಭಾರ ಕಚೇರಿಯಿಂದ ಸುರಕ್ಷತಾ ಸೂಚನೆಗಳನ್ನು ಸಹ ನೀಡಲಾಗಿದೆ: ಕಾನೂನು ಜಾರಿ ಚಟುವಟಿಕೆಯ ಸುತ್ತಲಿನ ಪ್ರದೇಶಗಳನ್ನು ತಪ್ಪಿಸಿ. ನಿಮ್ಮ ಸುತ್ತಮುತ್ತಲಿನ ಬಗ್ಗೆ ಎಚ್ಚರದಿಂದಿರಿ. ಆಶ್ರಯವನ್ನು ಹುಡುಕಿ ಮತ್ತು ನಿಮ್ಮ ಆಶ್ರಯದ ಹೊರಗೆ ಅನಗತ್ಯ ಚಲನೆಯನ್ನು ಕಡಿಮೆ ಮಾಡಿ. ನವೀಕರಣಗಳಿಗಾಗಿ ಸ್ಥಳೀಯ ಮಾಧ್ಯಮವನ್ನು ಮೇಲ್ವಿಚಾರಣೆ ಮಾಡಿ.

ಸ್ಥಳೀಯ ಅಧಿಕಾರಿಗಳ ನಿರ್ದೇಶನಗಳನ್ನು ಅನುಸರಿಸಿ ಮತ್ತು ತುರ್ತು ಸಂದರ್ಭದಲ್ಲಿ, 911 ಗೆ ಕರೆ ಮಾಡಿ. ಜನಸಂದಣಿಯನ್ನು ತಪ್ಪಿಸಿ.ಫೋನ್, ಪಠ್ಯ ಮತ್ತು ಸಾಮಾಜಿಕ ಮಾಧ್ಯಮದ ಮೂಲಕ ನಿಮ್ಮ ಸ್ಥಳ ಮತ್ತು ಯೋಗಕ್ಷೇಮದ ಬಗ್ಗೆ ಕುಟುಂಬ ಮತ್ತು ಸ್ನೇಹಿತರಿಗೆ ತಿಳಿಸಿ ಎಂದು ಮಿಷನ್ ಪೋಸ್ಟ್ ಮಾಡಿದೆ. ಪ್ರಬಲ ಮಾದಕವಸ್ತು ಕಾರ್ಟೆಲ್ ನಾಯಕ ನೆಮೆಸಿಯೊ ಒಸೆಗುರಾ ಅವರ ಹತ್ಯೆಯ ನಂತರ ಈ ಸಲಹೆ ನೀಡಲಾಗಿದೆ. ಅವನು ಮೆಕ್ಸಿಕೋ ಮತ್ತು ಯುನೈಟೆಡ್ ಸ್ಟೇಟ್?ಸನಲ್ಲಿ ಅತ್ಯಂತ ಬೇಕಾಗಿರುವ ವ್ಯಕ್ತಿಗಳಲ್ಲಿ ಒಬ್ಬನಾಗಿದ್ದನು.ಮೆಕ್ಸಿಕನ್ ಸೈನ್ಯವು ಭಾನುವಾರ ನಡೆದ ಕಾರ್ಯಾಚರಣೆಯಲ್ಲಿ ಒಸೆಗುರಾ, ಎಲ್ ಮೆಂಚೊ ನನ್ನು ಕೊಂದಿತು ಎಂದು ಫೆಡರಲ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪಶ್ಚಿಮ ರಾಜ್ಯವಾದ ಜಲಿಸ್ಕೊದಲ್ಲಿ ನಡೆದ ಮಿಲಿಟರಿ ಕಾರ್ಯಾಚರಣೆಯ ಸಮಯದಲ್ಲಿ ಇದು ಸಂಭವಿಸಿದೆ.

## ಫೆ.24ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 1ರಂದು ರೇಣುಕಾಚಾರ್ಯ ಜಯಂತಿ ಹಾಗೂ ಮಾರ್ಚ್ 3ರಂದು ಯೋಗಿನಾರಾಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿ ನಡೆಯಲಿವೆ.






ಈ ಜಯಂತಿಗಳ ಅಂಗವಾಗಿ ಫೆ.24ರ ಬೆಳಿಗ್ಗೆ 11 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿವೃತ್ತ ಸೈನಿಕರಿಗೆ, ಮೃತ ಸೈನಿಕರ ಕುಟುಂಬಕ್ಕೆ ಸರ್ಕಾರಿ ಭೂಮಿ ಮಂಜೂರು ಮಾಡುವಂತೆ ಡಿಎಸ್‌ಎಸ್ ಮಲ್ಲಿಕ್ ಮುರಾರಿ ಒತ್ತಾಯ



ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಿನಲ್ಲಿರುವ ನಿವೃತ್ತ ಸೈನಿಕರಿಗೆ ಮತ್ತು ಮೃತ ಸೈನಿಕರ ಕುಟುಂಬಸ್ಥರಿಗೆ ಸರ್ಕಾರಿ ಭೂಮಿ ಮಂಜೂರು ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಮಸ್ಕಿ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ ಸೋಮವಾರ ಒತ್ತಾಯಿಸಿದರು.

ನಂತರ ದಲಿತ ಸಂಘರ್ಷ ಸಮಿತಿ ಮಸ್ಕಿ ನಗರ ಘಟಕ ಅಧ್ಯಕ್ಷ ಮಲ್ಲಿಕ್ ಮುರಾರಿ ಮಾತನಾಡಿ, ನಿವೃತ್ತ ಹಾಗೂ ಮೃತ ಮಾಜಿ ಸೈನಿಕರ ಕುಟುಂಬಸ್ಥರಿಗೆ ಸರಕಾರದಿಂದ ಜಮೀನನ್ನು ನೀಡುವಂತೆ ಅರ್ಜಿ ಸಲ್ಲಿಸಿದರೂ ಸಂಬಂಧಪಟ್ಟ ಅಧಿಕಾರಿಗಳು ಭೂಮಿ ಮಂಜೂರು ಮಾಡದೇ ನಿರ್ಲಕ್ಷ್ಯ ವಹಿಸುತ್ತಿದ್ದಾರೆಂದು ಆರೋಪಿಸಿದರು. ನಿವೃತ್ತಿ ಹೊಂದಿ ತಮಗೆ ಸಿಗಬೇಕಾದ ಸರಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳಲು ದಿನ ನಿತ್ಯ ಸರ್ಕಾರಿ ಕಛೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಜಿಲ್ಲೆಯಲ್ಲಿ ಜಮೀನು ಮಂಜೂ-ರಿಗಾಗಿ ಒಟ್ಟು 105 ಜನ ನಿವೃತ್ತ ಸೈನಿಕರು ಅರ್ಜಿ ಸಲ್ಲಿಸಿದ್ದಾರೆ. ಅದರಲ್ಲಿ ಮಸ್ಕಿ ತಾಲೂಕಿನಿಂದ 07 ಅರ್ಜಿಗಳು ಸಲ್ಲಿಕೆಯಾಗಿ ಸುಮಾರು ವರ್ಷಗಳಾದರೂ ಅವರಿಗೆ ಜಮೀನು ಮಂಜೂರು ಮಾಡದೆ ಅಧಿಕಾ-ರಿಗಳ ಬೇಜವಾಬ್ದಾರಿ, ನಿಷ್ಕಾಳಜಿತನ ಎದ್ದು ಕಾಣಿಸುತ್ತದೆ. ತಾಲೂಕಿನಲ್ಲಿ ಸರ್ಕಾರಿ ಜಮೀನುಗಳಿದ್ದು, ತಾಲೂಕಿನ ಗುಡದೂರ ಹೋಬಳಿಯ ಮೇರನಾಳ ಗ್ರಾಮದ ಸರ್ವೆ ನಂ.66/1 36 ಎಕರೆ 01 ಗುಂಟೆ ಸರಕಾರಿ ಗಾಯರಾಣ ಜಮೀನಿದ್ದು, ತಾಲೂಕಿನ 07 ಜನ ನಿವೃತ್ತ ಸೈನಿಕರಿಗೆ ಕೂಡಲೇ ಸರ್ಕಾರಿ ಭೂಮಿ ಮಂಜೂರು ಮಾಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಈರಪ್ಪ ಕುಣೆಕೆಲ್ಲೂರು, ಮ-ರಿಸ್ವಾಮಿ ಹಸಮಕಲ್, ರಾಜು ಗುಡದೂರು, ಮರಿಸ್ವಾಮಿ, ಪ್ರದೀಪ, ಅಜಯ, ಪ್ರಮೋದ, ಸುರೇಶ ಗುಡದೂರು, ಬಸವರಾಜ, ಶೇಖರ, ಬಸವಲಿಂಗಪ್ಪ, ದೇವರಾಜ ಇದ್ದರು.

## ವರ್ಧಂತಿ ಉತ್ಸವ ಪ್ರಯುಕ್ತ ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಉಪನ್ಯಾಸ, ಸಂಗೀತ, ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ರಾಯರ ವರ್ಧಂತಿ ಉತ್ಸವದ ಪ್ರಯುಕ್ತ ಭಜನೆ, ಉಪನ್ಯಾಸ ಹಾಗೂ ಸಂಗೀತ ಕಾರ್ಯಕ್ರಮ ಜರುಗಿದವು.

ಬೆಂಗಳೂರಿನ ಪ್ರವಚನಕಾರ ಗುರುರಾಜ ದಾಸ್ ಅವರಿಂದ 'ಶ್ರೀ ಗುರು ಕಾರುಣ್ಯ'ಕುರಿತು ವಿಶೇಷ ಉಪನ್ಯಾಸ ಹಾಗೂ ಹುಬ್ಬಳ್ಳಿಯ ಆರ್.ಪಿ.ಕುಲಕರ್ಣಿ ತಂಡದವರಿಂದ ಸಂಗೀತ ಕಾರ್ಯಕ್ರಮ ಪ್ರೇಕ್ಷಕರ ಗಮನ ಸೆಳೆದವು. ಪ್ರತಿನಿತ್ಯ ವಿವಿಧ ಭಜನಾ ಮಂಡಳಿಗಳಿಂದ ಭಜನೆ ನಡೆದವು. ಕಾರ್ಯಕ್ರಮದಲ್ಲಿ



ರಾಯರ ಮಠದ ವಿಚಾರಣಾ ಕರ್ತ ರಾಘವೇಂದ್ರರಾವ್ ಕುಲಕರ್ಣಿ ಅರ್ಚಕ ನವೀನ್ ಆಚಾರ್ ಮುಖಂಡರಾದ ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಗೋವಿಂದರಾವ್ ಕುಲಕರ್ಣಿ, ಎಂ.ಕೆ. ಗೌರ್ಕರ್, ವೆಂಕಣ್ಣ ಆಚಾರ್ಯ ಜೋಶಿ, ಗುರುರಾಜ ಆಲ್ದಾಳ, ಗೋಪಾಲ್ ಆಚ-ಾರ ಜೋಶಿ, ಶ್ರೀಧರ ಕುಲಕರ್ಣಿ, ಪ್ರಹ್ಲಾದ ಗುಡಿ, ಹನುಮಂತ ಆಚಾರ್ಯ ಮಸ್ಕಿ, ವಾಸುದೇವ ಆಚಾರ್ಯ ಉಪ್ಪಳ, ಗುರುರಾಜ, ಹನುಮಂತರಾವ್, ಆನಂದ ಗೌರ್ಕರ್, ವಾದಿರಾಜ ಹೆಡಿಗಿನಾಳ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮಹಿಳಾ ಮತ್ತು ಮಕ್ಕಳ ಆರೋಗ್ಯಕ್ಕಾಗಿ ವೈದ್ಯರ ನೇಮಕ ಅಗತ್ಯ :ನರಸಿಂಹ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇ-ರಿಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹೆಚ್. ಶಿವರಾಮೇಗೌಡ ಬಣ ತಾಲೂಕು ಘಟಕದ ವತಿಯಿಂದ ಮುಖ್ಯಮಂತ್ರಿಗಳಿಗೆ ಉಪ ತಹಸೀಲ್ದಾರ್ ವಿನಾಯಕರಾವ್ ಅವರ ಮೂಲಕ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಕರವೇ ತಾಲೂಕು ಅಧ್ಯಕ್ಷ ನರಸಿಂಹ ಅವರು, ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅಗತ್ಯವಿರುವ ಕಾಯಂ ಸ್ತ್ರೀರೋಗ ತಜ್ಞರು, ಸ್ಕ್ಯಾನಿಂಗ್ ತಜ್ಞರು, ಮಕ್ಕಳ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ತಕ್ಷಣ ನೇಮಕ ಮಾಡುವಂತೆ ಒತ್ತಾಯಿಸಿದರು. ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆಯಿಂದ ಮಹಿಳೆಯರು ಹಾಗೂ ಮಕ್ಕಳು ಸಮರ್ಪಕ ಚಿಕಿತ್ಸೆ



ಪಡೆಯಲು ಸಂಕಷ್ಟ ಅನುಭವಿಸುತ್ತಿದ್ದಾರೆ.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ತಜ್ಞರನ್ನು ಕೂಡಲೇ ನೇಮಕ ಮಾಡಿ ಉತ್ತಮ ಆರೋಗ್ಯ ಸೇವೆ ಒದಗಿಸುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ದೀಪಕ್ ಯಾದವ್, ರವಿಕುಮಾರ ಮದ್ಲಾಪೂರ್, ತಾಯಪ್ಪ, ಅಂಜಿ ಯಾದವ್, ಅನಿಲ್ ಕುಮಾರ, ಹರೀಶ್ ಕಾತರಕಿ, ಶಾಂತಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮುನ್ನೂರು ಕಾಪು ಸಮಾಜ ಶ್ರೀಕೃಷ್ಣದೇವರಾಯ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಮುನ್ನೂರು ಕಾಪು ಸಮಾಜ ಶ್ರೀಕೃಷ್ಣದೇವರಾಯ ಜಯಂತಿ ಆಚರಣೆ ಮಾಡುವ ಮೂಲಕ ಇತಿಹಾಸ ಪರಂಪರೆಯನ್ನು ಪರಿಚಯಿಸುವ ಕಾರ್ಯ ಮಾಡುತ್ತಿದೆ' ಎಂದು ಸಚಿವ ಎನ್. ಎಸ್. ಬೋಸರಾಜು ಹೇಳಿದರು. ನಗರದ ವೀರಾಂಜನೇಯ ಕಲ್ಯಾಣ ಮಂಟಪದಲ್ಲಿ ಮುನ್ನೂರು ಕಾಪು ಸಮಾಜದ ವತಿಯಿಂದ ಆಯೋಜಿಸಿದ್ದ ಕೃಷ್ಣದೇವರಾಯ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಶ್ರೀಕೃಷ್ಣದೇವರಾಯ ಜಯಂತಿ ಸಮಿತಿ ಅಧಕ್ಷ ಎ.ಪಾಪಾರೆಡ್ಡಿ ಮಾತನಾಡಿ, 'ಹಿಂದಿನ ಕಾಲದಲ್ಲಿ ಮುನ್ನೂರು ಕಾಪು ಸಮಾಜವರು ಖಡ್ಗ ಹಿಡಿದು



ಯುದ್ಧಗಳಿಯುತ್ತಿದ್ದರು. ಇಂದು ಶಿಕ್ಷಣದ ಮೂಲಕ ಪ್ರಗತಿ ಸಾಧಿಸಿ ವ್ಯಾಪಾರಸ್ಥರಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ' ಎಂದು ತಿಳಿಸಿದರು. ಡಾ.ಎ ಜಿ ಶ್ರೀನಿವಾಸ್ ರೆಡ್ಡಿ, ಉಪನ್ಯಾಸಕಿ ರೇಣುಕಾ ಪಾಟೀಲ ಮಾತನಾಡಿದರು. ಅಭಿನವ ರೇಣುಕಾ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಮೆರವಣಿಗೆ: ಶ್ರೀಕೃಷ್ಣದೇವರಾಯ ಭಾವಚಿತ್ರದ ಮೆರವಣಿಗೆ ನಗರದ ಲಕ್ಷ್ಮಿ ಕಲ್ಯಾಣ ಮಂಟಪದ ಆವರಣದಿಂದ ಹೊರಟು ಸರ್ದಾರ್ ವಲ್ಲಭಬಾಯಿ ವೃತ್ತ, ಬಸವಣ ಭಾವಿ ವೃತ್ತ ಮಾರ್ಗವಾಗಿ ವೀರಾಂಜನೇಯ ಕಲ್ಯಾಣ ಮಂಟಪದ ಆವರಣಕ್ಕೆ ಬಂದು ಸಮಾರೋಪಗೊಂಡಿತು. ಮೆರವಣಿಗೆಯಲ್ಲಿ ಆಕರ್ಷಕ ಡೊಳ್ಳು ಕುಣಿತ ಹಾಗೂ ನಂದಿ ಕೋಲು ಕುಣಿತ ಪ್ರೇಕ್ಷಕರ ಗಮನ ಸೆಳೆಯಿತು. ಮುನ್ನೂರು ಕಾಪು ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ, ಪ್ರಧಾನ ಕಾರ್ಯದರ್ಶಿ ಜಿ.ಶೇಖರ ರೆಡ್ಡಿ, ಬಂಗಿ ನರಸರೆಡ್ಡಿ, ಕುಕ್ಕ ನರಸಿಂಹಲು,ಬೆಲ್ಲಂ ನರಸರೆಡ್ಡಿ, ಚನ್ನಬಸಯ್ಯ ಹಿರೇಮಠ, ಎ.ಜಿ. ಶ್ರೀನಿವಾಸ, ಕೃಷ್ಣಮೂರ್ತಿ, ಶೇಖರ ರೆಡ್ಡಿ, ಕೆ. ನರಸಿಂಹಲು, ನರಸ ರೆಡ್ಡಿ, ಜಿ.ಬಿ. ಲಕ್ಷ್ಮೀರೆಡ್ಡಿ, ಶ್ರೀನಿವಾಸರೆಡ್ಡಿ,ಚಂದ್ರಶೇಖರ ರೆಡ್ಡಿ, ಗುಡ್ಸಿ ಪ್ರತಾಪ ರೆಡ್ಡಿ, ಜಿ.ನರಸರೆಡ್ಡಿ, ಎಸ್. ಜನಾರ್ದನ ರೆಡ್ಡಿ,ಎನ್. ಕೇಶವರೆಡ್ಡಿ, ಭೀಮಾರೆಡ್ಡಿ,ಲಿಂಗಾರೆಡ್ಡಿ, ಅಂಗಡಿ ತಿಮ್ಮಾರೆಡ್ಡಿ, ಭಂಗಿ ತಿಮ್ಮಾರೆಡ್ಡಿ, ಜಂಪಾರೆಡ್ಡಿ,ಜಿ.ನ ಾಗರಾಜ,ಮಹೇಂದ್ರರೆಡ್ಡಿ, ಪುಂಡ್ಲ ರಾಜೇಂದ್ರರೆಡ್ಡಿ, ನಿಂಬೆಕಾಯಿ ಭೀಮರೆಡ್ಡಿ, ಉಟುಕೂರು ಗಣೇಶರೆಡ್ಡಿ, ಬಂಗಿ ಮುನಿರೆಡ್ಡಿ, ಅಲ್ಲಾಪಾಡು ಜಿ.ಗೋಪಾಲರೆಡ್ಡಿ, ಬೆಲ್ಲಂ ಶ್ರೀಧರ ರೆಡ್ಡಿ, ಕೆ.ರಾಜು ಕೆಪಿಸಿಸಿ, ಪ್ರಸಾದ ರೆಡ್ಡಿ,ಕೆ.ಅಮರೇಶರೆಡ್ಡಿ,ಗಜ್ಜು ನಾಗರಾಜ, ಬಿ. ರಾಜು ಪಾಲ್ಗೊಂಡಿದ್ದರು.

## ನೇಮಕಾತಿ ಪ್ರಕಟಣೆ

ದಾವಣಗೆರೆ ನಗರ ನಿಗಮ ನೇಮಕಾತಿ 2026–15 ನಾಗರಿಕ ಸೇವಕ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ದಾವಣಗೆರೆ ನಗರ ನಿಗಮ ನೇಮಕಾತಿ 2026: 15 ನಾಗರಿಕ ಸೇವಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ದಾವಣಗೆರೆ ನಗರ ನಿಗಮ ಫೆಬ್ರವರಿ 2026 ರ ಅಧಿಕೃತ ಅಧಿಸೂಚನೆಯ ಮೂಲಕ ನಾಗರಿಕ ಸೇವಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಾವಣಗೆರೆಯಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು–ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17–ಮಾರ್ಚ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 18–02–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17–ಮಾರ್ಚ್–2026 ಅಧಿಕೃತ ವೆಬ್‌ಸೈಟ್: ಜಚಿvanagerecity.mrc.gov.in

## ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸ ನೀಡಿ: ಕನ್ನಡ ಸೇನೆ ಕರ್ನಾಟಕ ಮನವಿ

ನೈಜ್ಯ ದೆಸೆ ನ್ಯೂಸ್

**ಅರಕೇರಾ: ಕನ್ನಡ ಸೇನೆ ಕರ್ನಾಟಕ ಅರಕೇರಾ ತಾಲೂಕು ಘಟಕದವತಿಯಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸ ನೀಡುವಂತೆ ಕನ್ನಡ ಸೇನೆ ಕರ್ನಾಟಕ ತಾಲೂಕ ಘಟಕದ ಅಧ್ಯಕ್ಷರಾದ ಮೈಹಿಬೂಬ ಬಡಿಗೇರಾ ಹಾಗೂ ಪದಾಧಿಕಾರಿಗಳು ಅರಕೇರಾ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಪತ್ರ ನೀಡಿದರು.**

ಅರಕೇರಾ ಪಟ್ಟಣದಲ್ಲಿ ಬಡ ಕೂಲಿ ಕಾರ್ಮಿಕರು ಕೆಲಸಕ್ಕೆ ಅರ್ಜಿ ಸಲ್ಲಿಸಿ ಸುಮಾರು 2 ತಿಂಗಳು ಆದರೂ ಕೆಲಸ ನೀಡಿದೆ ತಾಂತ್ರಿಕ ದೋಷ ನೆಪ ಹೇಳುತ್ತಿದ್ದಾರೆ. ಕಾರಣ ಜನರು ಗ್ರಾಮ ಪಂಚಾಯತಿಗೆ ಅಲೇದು



ಬೇಸತ್ತು ಹೋಗಿದ್ದಾರೆ,ಗುಳೆ ಹೋಗುತ್ತಿದ್ದಾರೆ. ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಕೆಲಸ ನೀಡುವಲ್ಲಿ ಸಂಪೂರ್ಣ ವಿಫಲರಾಗಿದ್ದು ಅವರ ಮೇಲೆ ಸೂಕ್ತ ಕ್ರಮ ಕೈಗೊಂಡು ಬಡ ಕೂಲಿ ಕಾರ್ಮಿಕರಿಗೆ ಕೆಲಸ ನೀಡಬೇಕೆಂದು ಅರಕೇರಾ ತಾಲೂಕು ಪಂಚಾಯತ ಕಾರ್ಯನಿರ್ವಾಕ ಅಧಿಕಾರಿಗಳಿಗೆ ಕನ್ನಡ ಸೇನೆ ಕರ್ನಾಟಕ ತಾಲೂಕು ಘಟಕದವತಿಯಿಂದ ಮನವಿಮಾಡಿಕೊಂಡರು.

ಒಂದು ವೇಳೆ ಕೆಲಸ ನೀಡದಿದ್ದರೆ ಮುಂದಿನ ದಿನಗಳಲ್ಲಿ ಪಂಚಾಯತ ಮುಂದೆ ಅನಿರ್ದಿಷ್ಟ ಧರಣಿ ಹಮ್ಮಿಕೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ. ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ತಾಲೂಕ ಘಟಕದ ಅಧ್ಯಕ್ಷರಾದ ಮೈಹಿಬೂಬ ಬಡಿಗೇರಾ ಪ್ರಧಾನ ಕಾರ್ಯದರ್ಶಿ ಹನುಂತ್ರಾಯಗಾಲಿ, ಅರಕೇರಾ ನಗರ ಘಟಕದ ಅಧ್ಯಕ್ಷರಾದ ಶಿವಗೇನಿ , ನಗರ ಘಟಕದ ಪ್ರಧಾನ ಕಾರ್ಯದರ್ಶಿ ಬಸನಗೌಡ ಎಂ, ಕರ್ನಾಳ ,ರಮೇಶ ಸಾತಲ್, ಯಲ್ಲಪ್ಪ ಸಾತಲ್ ಉಪಸ್ಥಿತರಿದ್ದರು.

ಚಿತ್ರಸುದ್ದಿ ಸಂಖ್ಯೆ 23(1) ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸ ನೀಡಿ ಅರಕೇರಾ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕನ್ನಡ ಸೇನೆ ಕರ್ನಾಟಕ ಅರಕೇರಾ ತಾಲೂಕು ಘಟಕದವತಿಯಿಂದ ಮನವಿ ಪತ್ರಸಲ್ಲಿಸುತ್ತಿರುವದು.

## ಇಂದು ಫೆ.24ರಂದು ಕ್ರೀಡಾ, ಸಾಂಸ್ಕೃತಿಕ ಉತ್ಸವ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಯುವ ಸಂಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವ–2026ರ ಕಾರ್ಯಕ್ರಮವನ್ನು ಫೆ.24ರ ಬೆಳಿಗ್ಗೆ 8ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.**

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅವರು ಉದ್ಘಾಟನೆ ನೆರವೇರಿಸುವರು. ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್‌ಅವರು ಘನ ಉಪಸ್ಥಿತಿ ವಹಿಸುವರು. ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಉಪಸ್ಥಿತಿ ವಹಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ವಿಜಯಶಂಕರ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಿ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಜಿ.ಪಂ ಪ್ರಕಟಣೆಯಲ್ಲಿ ತಿಳಿಸಿದೆ.

## ಬಜೆಟ್‌ನಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಿ: ಡಾ. ಜಾವೀದ್ ಖಾನ್

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ರಾಜ್ಯದ ಲಕ್ಷಾಂತರ ವಿದ್ಯಾವಂತ ನಿರುದ್ಯೋಗಿ ಯುವಕರ ಭವಿಷ್ಯವನ್ನು ಗಮನದಲ್ಲಿಟ್ಟು ಕರ್ನಾಟಕ ರಾಜ್ಯ ಬಜೆಟ್‌ನಲ್ಲಿ ಉದ್ಯೋಗ ಸೃಷ್ಟಿ ಮತ್ತು ಖಾಲಿ ಇರುವ ಸರ್ಕಾರಿ ಹುದ್ದೆಗಳ ಭರ್ತಿಗೆ ಆದ್ಯತೆ ನೀಡಬೇಕು ಎಂದು ದಲಿತ ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ. ಜಾವೀದ್ ಖಾನ್ ಹೇಳಿದರು.**

ಅವರಿಂದ ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಅಪಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ



ಮಾತನಾಡಿದ ಅವರು, ಹಲವು ವರ್ಷಗಳಿಂದ ಯುವಕರು ಸರ್ಕಾರಿ ಉದ್ಯೋಗಕ್ಕಾಗಿ ಸಿದ್ಧತೆ ಮಾಡಿಕೊಂಡು ಪರೀಕ್ಷೆಗಳಿಗೆ ಹಾಜರಾಗುತ್ತಿದ್ದರೂ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಸರ್ಕಾರ ನೇಮಕಾತಿ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ಹಾಗೂ ಸಮಯಬದ್ಧವಾಗಿ ಪೂರ್ಣಗೊಳಿಸಿ ಯುವಕರಿಗೆ ನ್ಯಾಯಯುತ ಉದ್ಯೋಗಾವಕಾಶಗಳನ್ನು ಒದಗಿಸಬೇಕು ಎಂದು ಅವರು ತಿಳಿಸಿದರು.

ರಾಜ್ಯದ ಶಿಕ್ಷಣ, ಆರೋಗ್ಯ, ಪೊಲೀಸ್, ಗ್ರಾಮೀಣಾಭಿವೃದ್ಧಿ, ಸಮಾಜ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಸಾವಿರಾರು ಹುದ್ದೆಗಳು ಖಾಲಿಯಾಗಿ ಉಳಿದಿದ್ದು, ಇದರಿಂದ ಸಾರ್ವಜನಿಕ ಸೇವೆಗಳ ಮೇಲೆ ಪರಿಣಾಮ ಬೀರುತ್ತಿದೆ. ಇದೇ ಹಿನ್ನೆಲೆದಲ್ಲಿ ರಾಜ್ಯ ಬಜೆಟ್‌ನಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡುವುದರ ಜೊತೆಗೆ ಹೊಸ ಹುದ್ದೆಗಳನ್ನು ಸೃಷ್ಟಿಸಿ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸುವಂತೆ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷರಾದ ಮಾರುತಿ ಚಿಕ್ಕಸುಗೂರು, ಮಹಿಳಾ ಘಟಕ ಜಿಲ್ಲಾಧ್ಯಕ್ಷರಾದ ಜಯಶ್ರೀ, ಕರವೇ ಅಧ್ಯಕ್ಷರಾದ ಸುರೇಶ ಬಾಬು ಸೇರಿದಂತೆ ಇನ್ನಿತರ ರೈತರು ಉಪಸ್ಥಿತರಿದ್ದರು.

## ನಾಯಿ ಕಡಿತ ಮತ್ತು ಹಾವು ಕಡಿತದ ಪ್ರಥಮ ಚಿಕಿತ್ಸೆ–ಅರಿವು ಮೂಡಿಸುವ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಫೆ 23 ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರು ಇವರ ವತಿಯಿಂದ ಭೋಗಾಪುರ ಗ್ರಾಮದಲ್ಲಿ ನಾಯಿ ಕಡಿತ ಮತ್ತು ಹಾವು ಕಡಿತದ ಪ್ರಥಮ ಚಿಕಿತ್ಸೆ, ಕ್ರಮಗಳ ಕುರಿತು ಶ್ರೀಮತಿ ಗೀತಾ ಕ್ಷೇತ್ರ ಆರೋಗ್ಯ ಶಿಕ್ಷಣಧಿಕಾರಿಗಳು ಮಾತನಾಡಿ ನಾಯಿ ಮತ್ತು ಹಾವು ಕಚ್ಚಿದ ತಕ್ಷಣ ಗಾಬರಿಯಾಗದೆ.**

ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಶಾಂತವಾಗಿಸಿ ಗಾಯಗೊಂಡ ಭಾಗವನ್ನು



ಸ್ಥಿರವಾಗಿ ಮತ್ತು ಹೃದಯಕ್ಕಿಂತ ಕೆಳಗೆ ಇರಿಸಿ ತಕ್ಷಣ ತುರ್ತು ವೈದ್ಯಕೀಯ ಚಿಕಿತ್ಸೆ ಸಹಾಯ (108) ಪಡೆಯಬೇಕು. ಗಾಯವನ್ನು ಸೋಪ್ ಮತ್ತು ನೀರಿನಿಂದ ಅಥವಾ ಸ್ವಚ್ಛವಾದ ಬಟ್ಟೆಯಿಂದ ಒರೆಸಿ ಕಚ್ಚಿದ ಜಾಗವನ್ನು ಕತ್ತರಿಸಬೇಡಿ, ಬಾಯಿಯಿಂದ ವಿಷ ಹೀರಬೇಡಿ ಬಟ್ಟೆಗಳನ್ನು ಕಟ್ಟಬೇಡಿ ಹಾವು ಕಡಿದ ವ್ಯಕ್ತಿಯನ್ನು ಕದಲದಂತೆನೋಡಿಕೊಳ್ಳಬೇಕು ಬಿಗಿಯಾದ ವಸ್ತುಗಳೆನಾದರೂ ಇದ್ದರೆ ತೆಗೆಯಬೇಕು, ಗವಯವನ್ನು ಆರೈಕೆಯನ್ನು ಮಾಡಬೇಕು ಐಸ್ ಹಾಕಬಾರದು, ಬೇಸಿಗೆ ಕಾಲದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ, ಮಾಹಿತಿ ನೀಡಲಾಯಿತು,

ನಂತರ ನಿಖಿಲ ತಾಲೂಕು epidemiologist ವಾಂತಿ ಭೇದಿ ಮತ್ತು ಇತರೆ ಸಾಂಕ್ರಾಮಿಕ ರೋಗಗಳ ಬಗ್ಗೆ ಮತ್ತು ಹಾವು ನಾಯಿ ಕಡಿತದ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಯಿತು ಮತ್ತು ಸಂಪ್ರದಾಯಿಕ ಚಿಕಿತ್ಸೆಕರು, ದೇವರ ಹೆಸರಲ್ಲಿ ಚಿಕಿಸ್ತೆ ನೀಡುವವರ ಹತ್ತಿರ ಹೋಗದೆ ಹತ್ತಿರದ ಸರಕಾರಿ ಅಥ– 'ವಾ ಖಾಸಗಿ ಆಸ್ಪತ್ರೆಗೆ ಹೋಗುವಂತೆ ಅರಿವು ಮೂಡಿಸಲಾಯಿತು ಸದರಿ ಕಾರ್ಯಕ್ರಮದಲ್ಲಿ ಆಂಜನೇಯ S/N, ಗುರುನಾಥ ಐಖಿಔ.,ಲಕ್ಷ್ಮಿದೇವಿ PHCO ಕಲ್ಮಂಗಿ, ರಾಧಾ ಆಶಾ ಕಾರ್ಯಕರ್ತೆ, ದುರ್ಗಮ್ಮ, ಮಲ್ಲಮ್ಮ ಅಂಗನವಾಡಿ ಕಾರ್ಯಕರ್ತೆಯರು ಮೈಭೂಬ್ ಸಬ್, ಗರ್ಭಿಣಿ ಹಾಗೂ ತಾಯಂದಿರು, ಸಾರ್ವಜನಿಕರು ಭಾಗವಹಿಸಿದ್ದರು.

## ವಿರಾಟ ಹಿಂದೂ ಸಮ್ಮೇಳನ–ಅದ್ದೂರಿ ಶೋಭಾಯಾತ್ರೆ

ನೈಜ್ಯ ದೆಸೆ ನ್ಯೂಸ್

**ಪಟ್ಟಣದಲ್ಲಿ ವಿರಾಟ ಹಿಂದೂ ಸಮ್ಮೇಳನದ ಅಂಗವಾಗಿ ಶನಿವಾರ ಅದ್ದೂರಿಯಾಗಿ ಶೋಭಾಯಾತ್ರೆ ನಡೆಯಿತು. ಪಟ್ಟಣದ ಬಸವೇಶ್ವರ ವೃತ್ತದಿಂದ ಬಸ್ ನಿಲ್ದಾಣದ ಕಾರ್ಯಕ್ರಮದ ಸ್ಥಳದವರೆಗೆ 101 ಮಹಿಳೆಯರ ಕಳಸ, ಡೊಳ್ಳು ಕುಣಿತ, ಕಣಿ ಹಲಿಗೆ ಕುಣಿತ, ಕುದುರೆ ಕುಣಿತೊಂದಿಗೆ ಅದ್ದೂರಿಯಾಗಿ ನಡೆಯಿತು.**



ಶೋಭಾಯಾತ್ರೆಯಲ್ಲಿ ಪಟ್ಟಣದಲ್ಲಿರುವ 35 ಕ್ಕೂ ಹೆಚ್ಚು ವಿವಿಧ ಮಹಾನೀಯರ ನಾಮಫಲಕ, ದೇವಸ್ಥಾನಗಳಿಗೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಲಾಯಿತು. ಕವಿತಾಳ ಕಲ್ಮಠದ ಅಭಿವನ ಸಿದ್ದಲಿಂದ ಸ್ವಾಮೀಜಿ ಮತ್ತು ನೀಲಗಲ್ ಬೃಹನ್ಮಠದ ರೇಣುಕಾ ಶಾಂತಮಲ್ಲಾ ಶಿವಾಚಾರ್ಯರು ಶೋಭಾಯಾತ್ರೆಗೆ ಚಾಲನೆ ನೀಡಿದರು. ವಿವಿಧ ಮಹಾನೀಯರ ಛದ್ಮವೇಶ ಧರಿಸಿದ ವಿದ್ಯಾರ್ಥಿಗಳು, ಮಾಜಿ ಸಂಸದ ಬಿ.ವಿ.ನಾಯಕ, ಜೆ.ಶಿವರಾಮರೆಡ್ಡಿ, ಜೆ.ದೇವರಾಜಗೌಡ, ಕೃಷ್ಣನಾಯಕ, ಶರಣಗೌಡ ಜಂಬಲದಿನ್ನಿ, ಮಲ್ಲಿಕಾರ್ಜುನ ಜಕ್ಕಲದಿನ್ನಿ, ರಮೇಶ ಚಿಂಚರಕಿ, ರಮೇಶ ಶೆಟ್ಟಿ ಸೇರಿದಂತೆ ವಿವಿಧ ಸಮಾಜಗಳ ಮುಖಂಡರು, ಯುವಕರು ಪಾಲ್ಗೊಂಡಿದ್ದರು.

## ವೈಜ್ಞಾನಿಕ ಚಿಂತನೆ ಮೈಗೂಡಿಸಿಕೊಳ್ಳಲು ಮಂಜುಳಾ ಅಂಗಡಿ ಕರೆ



ಕವಿತಾಳ:ಸ್ಥಳೀಯ ಸರ್ಕಾರಿ ಕನ್ಯಾ ಪ್ರೌಢಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ತಾಲೂಕು ಮಟ್ಟದ ವಿಜ್ಞಾನ ವಸ್ತುಪ್ರದರ್ಶನ ಕಾರ್ಯಕ್ರಮವು ವಿದ್ಯಾರ್ಥಿಗಳ ಸೃಜನಶೀಲತೆಗೆ ಸಾಕ್ಷಿಯಾಯಿತು.

ನೈಜ್ಯ ದೆಸೆ ನ್ಯೂಸ್

ಕವಿತಾಳ: ಸರ್ಕಾರಿ ಕನ್ಯಾ ಪ್ರೌಢಶಾಲೆಯಲ್ಲಿ ತಾಲೂಕು ಮಟ್ಟದ ವಿಜ್ಞಾನ ವಸ್ತುಪ್ರದರ್ಶನ

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲೆಯ ಮುಖ್ಯೋಪಾಧ್ಯಾಯಿನಿ ಮಂಜುಳಾ ಅಂಗಡಿ ಅವರು, "ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಸೀಮಿತವಾಗದೆ, ದೈನಂದಿನ ಜೀವನದಲ್ಲಿ ವಿಜ್ಞಾನದ ಮಹತ್ವವನ್ನು ಅರಿಯಬೇಕು. ಇಂತಹ ವಸ್ತುಪ್ರದರ್ಶನಗಳು ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಮತ್ತು ಹೊಸ ಆವಿಷ್ಕಾರಗಳಿಗೆ ನಾಂದಿ ಹಾಡಲು ಸಹಕಾರಿಯಾಗಲಿವೆ," ಎಂದು ತಿಳಿಸಿದರು.

ನೋಡುಗರ ಗಮನ ಸೆಳೆದ ಮಾದರಿಗಳು ತಾಲೂಕಿನ ವಿವಿಧ ಶಾಲೆಗಳಿಂದ ಆಗಮಿಸಿದ್ದ ನೂರಾರು ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ, ತ್ಯಾಜ್ಯ ನಿರ್ವಹಣೆ, ಆಧುನಿಕ ಕೃಷಿ ಪದ್ಧತಿ ಹಾಗೂ ಇಂಧನ ಉಳಿತಾಯದ ಕುರಿತಾದ ಆಕರ್ಷಕ ವೈಜ್ಞಾನಿಕ ಮಾದರಿಗಳನ್ನು ಪ್ರದರ್ಶಿಸಿದರು. ಮಕ್ಕಳು ತಾವು ಸಿದ್ಧಪಡಿಸಿದ ಮಾದರಿಗಳ ಬಗ್ಗೆ ಶಿಕ್ಷಕರಿಗೆ ಮತ್ತು ಸಾರ್ವಜನಿಕರಿಗೆ ಅತ್ಯಂತ ಆತ್ಮವಿಶ್ವಾಸದಿಂದ ವಿವರಿಸಿದ್ದು ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ಉಪ–ಪ್ರಾದೇಶಿಕ ವಿಜ್ಞಾನ ಕೇಂದ್ರ ರಾಯಚೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಅಧಿಕಾರಿಗಳು, ವಿವಿಧ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಬೃಹತ್ ಉಚಿತ ಆರೋಗ್ಯ ತಪಾಸಣೆ, ಶಸ್ತ್ರ ಚಿಕಿತ್ಸಾ ಶಿಬಿರ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ನಾವದಗಿ ಗ್ರಾಮದ ಪರ್ವತೇಶ್ವರ ಬ್ರಹನ್ಮಠದ ಪೂಜ್ಯ ಷ.ಬ್ರ.ಶ್ರೀ ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯ ಮಹಾಸ್ವಾಮಿಗಳ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವ ಅಂಗವಾಗಿ ಫೆ.25 ರಂದು ಬೃಹತ್ ಉಚಿತ ಆರೋಗ್ಯ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.**

ಅಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಘಂಟೆ ಯವರೆಗೆ ನಡೆಯಲಿರುವ ಈ ಶಿಬಿರದಲ್ಲಿ ಹೃದಯ ಕಾಯಿಲೆ, ನೇತ್ರ ತಪಾಸಣೆ, ಕಿಡ್ನಿ ಹರಳು, ಸಕ್ಕರೆ ಕಾಯಿಲೆ, ಮೂಲವ್ಯಾಧಿ, ಪಾರ್ಶ್ವ ವಾಯು, ಬೆನ್ನ ನೋವು ಹಾಗೂ ಇತರೆ ಕಾಯಿಲೆಗಳ ತಪಾಸಣೆ ಉಚಿತವಾಗಿ ನಡೆಸಲಾಗುವುದು. ಈ ಶಿಬಿರದ ನೇತೃತ್ವವನ್ನು ಡಾ.ಗುರುಲಿಂಗಯ್ಯ ಹಿರೇಮಠ,ಡಾ. ಗುರುಮೂರ್ತಯ್ಯ ಹಿರೇಮಠ ಹಾಗೂ ಡಾ.



ಕರಬಸಯ್ಯ ಹಿರೇಮಠ ವಹಿಸುವರು. ಶಿಬಿರದಲ್ಲಿ ಹೃದಯ ರೋಗ ತಜ್ಞ ಡಾ.ರಾಜಕುಮಾರ ಹಿರೇಮಠ, ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞೆ ಡಾ.ರಶ್ಮಿ ರಾ.ಹಿರೇಮಠ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ (ಚಬನೂರ), ವೈದ್ಯಾಧಿಕಾರಿ ಡಾ. ಶ್ರೀದೇವಿ ಹಿರೇಮಠ, ಆಯುರ್ವೇದ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ. ಶಿವರಾಜ ಒಡೆಯರ್ ಹಿರೇಮಠ, ಡಾ.ರುದ್ರಸ್ವಾಮಿ ಹಿರೇಮಠ, ಡಾ. ಆರೀಫ್ ಮನಿಯಾರ, ಡಾ. ಚಂದ್ರಶೇಖರ್ ನಾಗಲಿಕರ್, ಬಾಪುಗೌಡ ವಣಕಿಹಾಳ, ಡಾ.ಹರ್ಷವರ್ಧನ ಹಳ್ಳಿ ಪಾಟೀಲ,ಡಾ.ಚಂದ್ರಶೇಖರ ಶಿವಯೋಗಿಮಠ ಇವುರಗಳು ಭಾಗವಹಿಸಿ ರೋಗಿಗಳ ತಪಾಸಣೆ ನಡೆಸುವರು. ನಾವದಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗ್ರಾಮಸ್ಥರು ಶಿಬಿರದ ಸದುಪಯೋಗ ಮಾಡಿಕೊಳ್ಳಬೇಕು. ಬರುವಾಗ ಈ ಮೊದಲು ವೈದ್ಯರ ಬಳಿ ತಪಾಸಣೆ ನಡೆಸಿದ್ದರೆ ಅವರ ವರದಿಯನ್ನು ಜೊತೆಯಲ್ಲಿ ತರಬೇಕೆಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಲು ಮಾರ್ಚ್ 5 ಕೊನೆಯ ದಿನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಮಾರ್ಚ್ 05ರವರೆಗೆ ವಿಸ್ತರಿಸಲಾಗಿದೆ.**

ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ಅರ್ಜಿಯ ಅವಧಿಯನ್ನು ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳವಂತೆ ಕೋರಲಾಗಿದೆ.

ಬಿ.ಆರ್ಕ್, ಎಂ.ಸಿ.ಎ, ಎಂ.ಸಿ.ಎಚ್ (ವೈದ್ಯಕೀಯ), ಎಂ.ಡಿ, ಎಂ.ಎಸ್ (ಮಾಸ್ಟರ್ ಆಫ್ ಸರ್ಜರಿ), ಎಂ.ಎಸ್, ಎಂ.ಎಸ್ಸಿ (ಅಲೈಡ್ ಸೈನ್ಸಸ್), ಎಂಪಿಟಿ (ಫಿಸಿಯೋಥೆರಪಿ), ಎಂಎಚ್‌ಎ, ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್, ಎಂಪಿಎಚ್ (ಅಲೈಡ್ ಸೈನ್ಸಸ್), ಎಂ.ಎಸ್ಸಿ. ನರ್ಸಿಂಗ್, ಎಂ.ಎಸ್ಸಿ, ಎಂ.ಟೆಕ್, ಎಂಬಿಎ, ಎಂಬಿಎ ಫಿನ್‌ಟೆಕ್, ಎಂಬಿಎ (ಲಾಜಿಸ್ಟಿಕ್ಸ್ ಮ್ಯಾನೇಜ್‌ಮೆಂಟ್), ಎಂಬಿಬಿಎಸ್, ಎಂಎಸ್ ಆಯುರ್ವೇದ, ಎಂಡಿ (ಆಯುರ್ವೇದ), ಎಂಡಿ (ಹೋಮ್), ಎಂಡಿಎಸ್, ಪಿಜಿ ಡಿಪ್ಲೊಮಾ ಇನ್ ಡೆಂಟಲ್, ಫಾರ್ಮ್.ಡಿ (ಪೋಸ್ಟ್ ಬ್ಯಾಕಲೌರಿಯೇಟ್), ಎಂ.ಫಾರ್ಮ್, ಬಿ.ಇ, ಬಿ.ಟೆಕ್,

GOVERNMENT OF KARNATAKA
STATE SCHOLARSHIP PORTAL

ಬಿ.ಎಸ್ಸಿ (ಆನರ್ಸ್), ಬಿ.ವಿ.ಎಸ್ಸಿ.&ಎ.ಎಚ್, ಬಿಎಎಂಎಸ್ (ಆಯುರ್ವೇದ), ಬಿಎಚ್‌ಎಂಎಸ್ (ಹೋಮಿಯೋಪತಿ), ಬಿಎನ್‌ವೈಎಸ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ), ಬಿಯುಎಂಎಸ್ (ಯುನಾನಿ), ಬಿಎಎಂಎಸ್, ಬಿಡಿಎಸ್, ಎಂ.ಆರ್ಕ್, ಬಿ.ಎಫ್.ಎಸ್ಸಿ, ಬಿ.ಫಾರ್ಮ್, ಫಾರ್ಮ್. ಡಿ, ಬಿ.ಎಸ್ಸಿ (ಅಲೈಡ್ ಸೈನ್ಸಸ್), ಬಿಪಿಟಿ (ಫಿಸಿಯೋಥೆರಪಿ), ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ, ಬಿ.ಡೆಸ್, ಬಿ.ಎಸ್ಸಿ. (ನರ್ಸಿಂಗ್), ಬಿ.ಎಸ್ಸಿ. (ಪೋಸ್ಟ್ ಬೇಸಿಕ್), ಬಿ.ಎಡ್, ಬಿ.ಪ್ಲಾನ್, ಡಿಎಂ (ವೈದ್ಯಕೀಯ), ಎಂ.ಫಿಲ್, ಬಿ ಟೆಕ್ ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ (ಪೂರ್ಣ ಸ್ಟ್ಯಾಕ್ ಡೆವಲಪ್ಮೆಂಟ್), ಬಿ ಟೆಕ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ (ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ), ಪ್ಯಾರಾಮೆಡಿಕಲ್ ಮತ್ತು ಎಲ್ಲಾ ಡಿಪ್ಲೊಮಾ ಕೋರ್ಸ್‌ಗಳ ವಿದ್ಯಾರ್ಥಿಗಳು ಮಾರ್ಚ್ 05ರೊಳಗಾಗಿ ವೆಬ್‌ಸೈಟ್ ವಿಳಾಸ: https://ssp.postmatric.karnataka.gov.in ನಲ್ಲಿ ಸಲ್ಲಿಸಬಹುದಾಗಿದೆ.

ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್‌ಸೈಟ್ ವಿಳಾಸ: https://bcwd.karnataka.gov.in ಮಾಹಿತಿಗಾಗಿ ಭೇಟಿ ನೀಡಬಹುದಾಗಿದೆ. ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಮೇಲ್: bcwdhelpline@gmail.ಛಿಂಟ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಅಥವಾ ಸಹಾಯಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

